(ಇಂದು ದಿನಾಂಕ 27-09-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

**ಮುಂದುವರಿದ ಮುಖ್ಯ ವಿಚಾರಣೆ – ಪ್ರತಿವಾದಿ ಪರ ಶ್ರೀ ಆರ್.ಎಸ್.ಹೆಚ್.(ಜಿ) ವಕೀಲರಿಂದ–**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು, ಅದನ್ನು ಓದಿ ತಿಳಿದುಕೊಂಡು ನಂತರ ಅದಕ್ಕೆ ನಾನು ಸಹಿ ಹಾಕಿರುತ್ತೇನೆ.

ನಮ್ಮ ಅಣ್ಣ ಸುರೇಶ ಇವರು ಬರೆದುಕೊಟ್ಟಂತಹ ಮೃತ್ಯುಪತ್ರ ನೋಡಿದರೆ ಗುರುತಿಸುತ್ತೇನೆ. ನಾನು ಅದಕ್ಕೆ ಸಾಕ್ಷಿದಾರನಾಗಿ ಸಹಿ ಹಾಕಿದ್ದೇನೆ. ಸದರಿ ಮೃತ್ಯಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಮೃತ್ಯುಪತ್ರವನ್ನು ಈಗಾಗಲೇ ನಿ.ಡಿ.4 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿ ನಿ.ಡಿ. 4(ಎ) ಎಂದು ಗುರುತಿಸಲಾಯಿತು. ಸದರಿ ಮೃತ್ಯುಪತ್ರಕ್ಕೆ ಸುರೇಶ ಇವರು ಹಾಕಿದಂತಹ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಸದರಿ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ.ಪಿ.4(ಬಿ) ಎಂದು ಗುರುತಿಸಲಾಯಿತು. ನಮ್ಮ ತಂದೆಯವರು ಮೃತಪಟ್ಟಿದ್ದಾರೆ. ಅದಕ್ಕೆ ನಮ್ಮ ತಂದೆ ಸಹಿ ಹಾಕಿದ್ದಾರೆ. ಸದರಿ ಮೃತ್ಯುಪತ್ರದ ಪ್ರತಿಯೊಂದು ಪುಟಕ್ಕೆ ಸುರೇಶ ಇವರು ಸಹಿ ಹಾಕಿದ್ದಾರೆ.

**(ಈ ಹಂತದಲ್ಲಿ ವಾದಿ ಪರ ವಕೀಲರು ಹಾಜರಿದ್ದು ಪಾಟೀ ಸವಾಲಿಗೆ ಸಮಯ ಕೋರಿದ್ದರಿಂದ ಮುಂದೂಡಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

ಪ್ರಧಾನ ಹಿರಿಯ ಸಿವಿಲ್ ಜಡ್ಜ, ಕಾರವಾರ